# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು–572 103

ಸಂಖ್ಯೆ: ತುವಿ: ಡಿಇವಿ–02:2024–25/ 2695 ದಿನಾಂಕ:19.12.2024

**"ಸುತ್ತೋಲೆ"**

ವಿಷಯ: "ಮಾದಕ ವಸ್ತುಗಳ ವಿರುದ್ಧ ಕರ್ನಾಟಕ"–ನಮ್ಮ ಸಂಕಲ್ಪ: ಡ್ರಗ್ಸ್ ಮುಕ್ತ ಕರ್ನಾಟಕ ಅಭಿಯಾನದ ಭಾಗವಾಗಿ ದಿನಾಂಕ:21.12.2024 ರಂದು ನಡೆಯುತ್ತಿರುವ ವಾಕಥಾನ್/ಜಾಥಾದಲ್ಲಿ ವಿದ್ಯಾರ್ಥಿಗಳು ಭಾಗವಹಿಸುವ ಕುರಿತು.

ಉಲ್ಲೇಖ:1: ಶಶಿಧರ್ ಎಸ್. ದೋಣಿಹಕ್ಲು, ಜಿಲ್ಲಾ ವರದಿಗಾರರು, ವಿಜಯಕರ್ನಾಟಕ, ತುಮಕೂರು ಇವರ ಪತ್ರ ದಿನಾಂಕ:19.12.2024

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:19.12.2024

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(01)ರ ಪತ್ರದಲ್ಲಿ ವಿಜಯ ಕರ್ನಾಟಕ, ಜಿಲ್ಲಾ ಪೊಲೀಸ್ ಜಿಲ್ಲಾ ಪಂಚಾಯತ್, ಜಿಲ್ಲಾಡಳಿತ, ಮಹಾನಗರ ಪಾಲಿಕೆ, ಸಿದ್ದಗಂಗಾ ಮೆಡಿಕಲ್ ಕಾಲೇಜು ಸಹಯೋಗದಲ್ಲಿ **"ಮಾದಕ ವಸ್ತುಗಳ ವಿರುದ್ಧ ಕರ್ನಾಟಕ–ನಮ್ಮ ಸಂಕಲ್ಪ: ಡ್ರಗ್ಸ್ ಮುಕ್ತ ಕರ್ನಾಟಕ ಅಭಿಯಾನದ ಭಾಗವಾಗಿ ದಿನಾಂಕ:21.12.2024 ರ ಶನಿವಾರದಂದು ಬೆಳಗ್ಗೆ 8.00 ಗಂಟೆಗೆ** ತುಮಕೂರು ವಿಶ್ವವಿದ್ಯಾನಿಲಯ ಮತ್ತು ಸಿದ್ದಗಂಗಾ ಮೆಡಿಕಲ್ ಕಾಲೇಜು(ಎಸ್.ಎಸ್. ಸರ್ಕಲ್) ಆವರಣದಿಂದ ಜಾಗೃತಿ ಜಾಥಾ ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ. ಈ ಸಂಬಂಧ ವಿಶ್ವವಿದ್ಯಾನಿಲಯದ ಅಧೀನದಲ್ಲಿ ಬರುವ ಕಾಲೇಜು ವಿದ್ಯಾರ್ಥಿಗಳು/ಎನ್.ಎಸ್.ಎಸ್/ಎನ್.ಸಿ.ಸಿ ಯ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳನ್ನು ಕಳುಹಿಸಿಕೊಡಬೇಕೆಂದು ಕೋರಿರುತ್ತಾರೆ. ವಿಶ್ವವಿದ್ಯಾನಿಲಯ ಕಾಲೇಜಿನ ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯ ಆವರಣದಿಂದಲೇ ಜಾಥ ಹೊರಟು ಸಿದ್ದಗಂಗಾ ಮೆಡಿಕಲ್ ಕಾಲೇಜು ಅಲ್ಲಿ ಸೇರಿರುವ ವಿದ್ಯಾರ್ಥಿಗಳೊಡನೆ ಜಾಥಾ ಮುನ್ನಡೆಯಲು, ಟೌನ್‌ಹಾಲ್ ವೃತ್ತದವರೆಗೆ ಜಾಥಾ ತೆರಳಿ, ಅಲ್ಲಿಂದ ವಾಪಸ್ಸು ವಿಶ್ವವಿದ್ಯಾನಿಲಯ ತಲುಪುವುದೆಂದು ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಘಟಕ ಕಾಲೇಜುಗಳು ಮತ್ತು ತುಮಕೂರು ನಗರದ ಸಂಯೋಜಿತ ಕಾಲೇಜುಗಳ ವಿದ್ಯಾರ್ಥಿಗಳನ್ನು **ದಿನಾಂಕ:21.12.2024 ರ ಶನಿವಾರದಂದು** ಬೆಳಗ್ಗೆ 7.45 ಗಂಟೆಗೆ ತುಮಕೂರು ವಿಶ್ವವಿದ್ಯಾನಿಲಯದ ಆವರಣದ ಮುಖ್ಯದ್ವಾರದಲ್ಲಿ ಹಾಜರಿರಲು ಮತ್ತು ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಲು ಸೂಕ್ತ ಕ್ರಮವಹಿಸುವಂತೆ ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ,

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ

ಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಮತ್ತು ತುಮಕೂರು ನಗರದ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.

ಪ್ರತಿಗಳು:

1. ಶಶಿಧರ್ ಎಸ್. ದೋಣಿಹಕ್ಲು, ಜಿಲ್ಲಾ ವರದಿಗಾರರು, ವಿಜಯಕರ್ನಾಟಕ, ತುಮಕೂರು
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು–ಈ ಸುತ್ತೋಲೆಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
5. ಕಚೇರಿ ಪ್ರತಿ